# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಸದಸ್ಯರ ಹೆಸರು** | : | ಶ್ರೀ.ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 2072 (2359) |
| **ಉತ್ತರ ದಿನಾಂಕ** | : | 27.03.2026 |
| **ಉತ್ತರಿಸುವವರು** | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಕಳೆದ 3 ವರ್ಷದಿಂದ ಇಲ್ಲಿಯವರೆಗೂ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಎಷ್ಟು ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ: | ಕಳೆದ 3 ವರ್ಷದಿಂದ ಇಲ್ಲಿಯವರೆಗೂ ಗ್ರಾಮೀಣ ಭಾಗದಲ್ಲಿ ಒಟ್ಟು 296 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ. |
| ಆ) | ಶುದ್ಧ ನೀರಿನ ಪೂರೈಕೆಯಲ್ಲಿ ಆಡಳಿತ ವ್ಯವಸ್ಥೆಯ ವೈಫಲ್ಯ, ಕಲುಷಿತ ನೀರು ಕುಡಿದು ಸಾವು. ನೋವುಗಳಿಗೆ ಸಂಬಂಧಿಸಿದಂತೆ ಯಾವುದಾದರೂ ಪ್ರಕರಣಗಳು ದಾಖಲಾಗಿದೆಯೇ: | ಪ್ರಸಕ್ತ ಸಾಲಿನಲ್ಲಿ ನೀರಿನ ಸೇವನೆಯಿಂದಾಗಿ,ಯಾವುದೇ ಸಾವು ನೋವಿನ ಪ್ರಕರಣಗಳು ಗ್ರಾಮೀಣ ಭಾಗದಲ್ಲಿ ಕಂಡು ಬಂದಿರುವುದಿಲ್ಲ. |
| ಇ) | ಸ್ಥಾಪಿಸಲಾಗಿರುವ ಶುದ್ಧ ನೀರಿನ ಘಟಕಗಳಲ್ಲಿ ಸ್ಥಗಿತಗೊಂಡಿರುವ ಘಟಕಗಳು ಎಷ್ಟು ಹಾಗೂ ಚಾಲ್ತಿಯಲ್ಲಿರುವ ಘಟಕಗಳು ಎಷ್ಟು: | ಕಳೆದ 3 ವರ್ಷದಿಂದ ಸ್ಥಾಪಿಸಲಾಗಿರುವ 296 ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಒಟ್ಟು 7 ಘಟಕಗಳು ಸ್ಥಗಿತಗೊಂಡಿರುತ್ತವೆ ಹಾಗೂ 289 ಘಟಕಗಳು ಚಾಲ್ತಿಯಲ್ಲಿರುತ್ತವೆ. |
| ಈ) | ಪ್ರತಿ ಘಟಕಕ್ಕೆ ಎಷ್ಟು ಹಣವನ್ನು ನಿಗದಿಪಡಿಸಲಾಗಿದೆ: ಇದರ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ಹಾಗೂ ಗುತ್ತಿಗೆದಾರರಿಗೆ ಇದರ ನಿರ್ವಹಣೆಯ ಬಗ್ಗೆ ನೀಡಿರುವ ನೀತಿ ನಿಯಮಗಳೇನು: | ಪ್ರತಿ ಘಟಕದ ನಿರ್ವಹಣೆಗೆ ಮಾಹೆಯಾನ ರೂ 3000 ಗಳನ್ನು ನಿಗದಿಪಡಿಸಲಾಗಿದ್ದು, ಇದರ ನಿರ್ವಹಣೆಯನ್ನು ಗ್ರಾಮ ಪಂಚಾಯತ್ ಮತ್ತು ಟೆಂಡರ್ ಮೂಲಕ ಏಜೆನ್ಸಿಗಳಿಗೆ ವಹಿಸಲಾಗಿರುತ್ತದೆ. ಗುತ್ತಿಗೆದಾರರಿಗೆ ಘಟಕಗಳ ನಿರ್ವಹಣೆಯ ಕುರಿತು ಇಲಾಖೆವತಿಯಿಂದ SOP(Standard Operating Procedure)ಯನ್ನು ಹೊರಡಿಸಲಾಗಿದ್ದು,SOP ಪ್ರತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ. |
| ಉ) | ಏಜೆನ್ಸಿಗಳು (ಗುತ್ತಿಗೆದಾರ) ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲು ತೋರಿಸಿದ ಆಸಕ್ತಿಯನ್ನು ನಿರ್ವಹಣೆಯಲ್ಲಿ ತೋರಿಸುತ್ತಿಲ್ಲದಿರುವುದು ನಿಜವೇ: ಹಾಗಿದ್ದಲ್ಲ. ಇದರ ಬಗ್ಗೆ ತೆಗೆದುಕೊಂಡ ಕ್ರಮವೇನು ಹಾಗೂ ಏಜೆನ್ಸಿಗಳಿಂದ ದಂಡವನ್ನು ವಸೂಲಿ ಮಾಡಲಾಗಿದೆಯೇ? | ರಾಜ್ಯದ ಗ್ರಾಮೀಣ ಭಾಗದಲ್ಲಿ ಅಳವಡಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ವಹಿಸುತ್ತಿರುವ ಏಜೆನ್ಸಿಗಳು ಅಸಮರ್ಪಕ ನಿರ್ವಹಣೆ ಮಾಡುತ್ತಿದ್ದಲ್ಲಿ ನೋಟೀಸ್ ಗಳನ್ನು ನೀಡಿ ಟೆಂಡರ್ ನಿಯಮಾನುಸಾರ ಕ್ರಮ ವಹಿಸಲಾಗುತ್ತಿದೆ. |

ಸಂ:ಗ್ರಾಕುನೀ&ನೈಇ/ಮುಇಂ / 173 /2025-26

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ ಸಚಿವರು.